# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **68 (105)** |
| **ಸದಸ್ಯರ ಹೆಸರು** | | **ಶ್ರೀ ಮಧು ಜಿ.ಮಾದೇಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | | **17-08-2026** |
| **ಉತ್ತರಿಸಬೇಕಾದ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| (ಅ) | ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ಶ್ರೇಣಿಯ ವೇತನ ಪಡೆಯುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕೆಲ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಾಧ್ಯಾಪಕರು ನಿಯೋಜನೆ ಆಧಾರದ ಮೇಲೆ ಕಡಿಮೆ ಸಂಬಳ ಬೋಧಕೇತರ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂಬ ಆರೋಪ/ದೂರಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಾಧ್ಯಾಪಕರು ನಿಯೋಜನೆ ಮೇಲೆ ಬೋಧಕೇತರ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ಹೆಸರು, ಪದನಾಮ, ಕರ್ತವ್ಯ ನಿರ್ವಹಿಸುತ್ತಿದ್ದ ಮೂಲಸ್ಥಳ, ನಿಯೋಜನೆಗೊಂಡ ಸ್ಥಳ ಮತ್ತು ವರ್ಷದೊಂದಿಗೆ ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 262 ಡಿಸಿಇ 2012, ದಿನಾಂಕ:11-07-2012 ರನ್ವಯ ಶೈಕ್ಷಣಿಕ ನಿರ್ವಹಣೆ ಮತ್ತು ಸಂಶೋಧನೆಗಳಲ್ಲದ ಹುದ್ದೆಗಳ ನಿಯೋಜನೆ ಮೇಲೆ ತೆರಳಿದ ಬೋಧಕರಿಗೆ ಯು.ಜಿ.ಸಿ ವೇತನ ಶ್ರೇಣಿ ವಿಸ್ತರಿಸಲು ಅವಕಾಶವಿಲ್ಲದೆ ರಾಜ್ಯ ವೇತನ ಶ್ರೇಣಿ ವಿಸ್ತರಿಸಬೇಕಾಗಿರುತ್ತದೆ. |
| (ಇ) | "ಯುಜಿಸಿ ವೇತನ ಶ್ರೇಣಿ ಪಡೆಯುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರು ಮತ್ತು ಪ್ರಾಂಶುಪಾಲರನ್ನು ಬೋಧಕೇತರ ಹುದ್ದೆಗಳಿಗೆ ನಿಯೋಜನೆ ಮಾಡಬಾರದು. ಇದು ಯುಜಿಸಿ ನಿಯಮಗಳಿಗೆ ವಿರುದ್ಧ" ಎಂದು ಘನ ನ್ಯಾಯಾಲಯದ ಆದೇಶ ಇದ್ದರೂ ನಿಯೋಜನೆ ಮುಂದುವರೆಸಿರುವುದು ನಿಜವೇ; (ವಿವರ ನೀಡುವುದು) | ಈ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಮಾನ್ಯ ಶಾಸಕರು, ಕೆ.ಜಿ.ಎಫ್ ವಿಧಾನ ಸಭಾ ಕ್ಷೇತ್ರ ಇವರ ಆಪ್ತ ಕಾರ್ಯದರ್ಶಿಯಾಗಿ ಶ್ರೀ ಭಾನುಪ್ರಕಾಶ್ ಕೆ, ನಿರ್ವಹಣಾಶಾಸ್ತ್ರ, ಸಹಾಯಕ ಪ್ರಾಧ್ಯಾಪಕರು, ಸರ್ಕಾರಿ ಮಹಿಳಾ ಕಾಲೇಜು, ಕೆ.ಆರ್. ನಗರ ಇವರು ನಿಯೋಜನೆ ಮೇರೆಗೆ ಮಾರ್ಚ್-2024 ರಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ಇವರಿಗೆ ರಾಜ್ಯ ವೇತನ ಶ್ರೇಣಿಯಲ್ಲಿ ವೇತನ ಪಾವತಿಸಲಾಗುತ್ತಿದೆ. |
| (ಈ) | ಶಿಕ್ಷಣದಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳಲು ಬೋಧಕ ವರ್ಗದ ನಿಯೋಜನೆಗಳನ್ನು ರದ್ದು ಮಾಡುವ ಕುರಿತು ಸರ್ಕಾರದ ಕ್ರಮಗಳೇನು; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಬೋಧಕರ ಕೊರತೆ ಹಾಗೂ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉದ್ಭವವಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಯು.ಜಿ.ಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿದ ಅರ್ಹ ಅತಿಥಿ ಉಪನ್ಯಾಸಕರ ಸೇವೆಯನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳಲಾಗುತ್ತಿದ್ದು, ಆ ಮೂಲಕ ಶಿಕ್ಷಣದ ಗುಣಮಟ್ಟ ಕುಸಿಯದಂತೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ. |

<table>
<tr>
<td>(ಉ)</td>
<td>ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿ ಮಾಡುವ ನಿಟ್ಟಿನಲ್ಲಿ ತೆಗೆದುಕೊಂಡಿರುವ ಕ್ರಮಗಳೇನು?</td>
<td>ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕಛೇರಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಬೋಧಕೇತರ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ.
<table>
<tr><th>ಮಂಜೂರಾದ ಹುದ್ದೆ</th><th>ಭರ್ತಿ ಹುದ್ದೆ</th><th>ಖಾಲಿ ಹುದ್ದೆ</th></tr>
<tr><td>5005</td><td>1394</td><td>3611</td></tr>
</table>
ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರಾಗಿ, ಖಾಲಿ ಇರುವ ಬೋಧಕೇತರ ಹುದ್ದೆಗಳಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿಗೆ ಮೀಸಲಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ. ಮುಂದುವರೆದು, ಮುಂಬಡ್ತಿಗೆ ಮೀಸಲಿರಿಸಲಾದ ಹುದ್ದೆಗಳನ್ನು ಕಾಲ ಕಾಲಕ್ಕೆ ಅರ್ಹ ಪೋಷಕ ವೃಂದದಿಂದ ಬಡ್ತಿ ಮೂಲಕ ತುಂಬಲು ಕ್ರಮ ವಹಿಸಲಾಗುತ್ತಿದೆ.<br><br>
ಅಲ್ಲದೆ, ಸರ್ಕಾರದ ಕಾರ್ಯನೀತಿಯನ್ವಯ 102 ಡಾಟಾ ಎಂಟ್ರಿ ಆಪರೇಟರ್ ಹಾಗೂ 1347 ಗ್ರೂಪ್-ಡಿ ವೃಂದದ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಬಳಸಿಕೊಳ್ಳಲು ಕ್ರಮವಹಿಸಲಾಗಿದೆ.</td>
</tr>
</table>

ಇಡಿ 262 ಡಿಸಿಇ 2026 (ಇ)

**(ಬಸವರಾಜ ರಾಯರೆಡ್ಡಿ)**
ಉನ್ನತ ಶಿಕ್ಷಣ ಸಚಿವರು